## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಸದ್ಗುರು ಕಬೀರಾನಂದಸ್ವಾಮಿ ವಿದ್ಯಾಪೀಠ ಇವರ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಪ್ಯಾರಾ ಮೆಡಿಕಲ್ ಸೈನ್ಸಸ್, ಚಿತ್ರದುರ್ಗ ಈ ಸಂಸ್ಥೆಯಲ್ಲಿ ನಡೆಸಲಾಗುತ್ತಿರುವ ಕೋರ್ಸಿನ ಪ್ರವೇಶಮಿತಿ ಹೆಚ್ಚಿಸಲು ಮಂಜೂರಾತಿ ನೀಡುವ ಬಗ್ಗೆ.

******

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ ಆಕುಕ 21 ಎಂಎಂಇ 2011, ಬೆಂಗಳೂರು ದಿನಾಂಕ 12/01/2012
2) ಮುಖ್ಯ ಕಾರ್ಯನಿರ್ವಹಣಾ ನಿರ್ದೇಶಕರು, ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ ಪಿಎಂಬಿ/104/2018-19 ದಿನಾಂಕ 18/07/2019 ಮತ್ತು ಪಿಎಂಬಿ/73/2019-20

**ಪ್ರಸ್ತಾವನೆ:**

ಓದಲಾದ (1) ರ ಸರ್ಕಾರದ ಆದೇಶದಲ್ಲಿ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಪ್ಯಾರಾ ಮೆಡಿಕಲ್ ಸೈನ್ಸಸ್, ಚಿತ್ರದುರ್ಗ ಈ ಸಂಸ್ಥೆಯನ್ನು 2011-12 ನೇ ಶೈಕ್ಷಣಿಕ ವರ್ಷದಿಂದ 20 ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಮತ್ತು ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ನೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಓದಲಾದ (2) ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಹಣಾ ನಿರ್ದೇಶಕರು, ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು ಇವರು ಶ್ರೀ ಸದ್ಗುರು ಕಬೀರಾನಂದಸ್ವಾಮಿ ವಿದ್ಯಾಪೀಠ ಇವರ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಪ್ಯಾರಾ ಮೆಡಿಕಲ್ ಸೈನ್ಸಸ್, ಚಳ್ಳಕೆರೆ ರಸ್ತೆ, ಚಿತ್ರದುರ್ಗ-577501 ಈ ಸಂಸ್ಥೆಯಲ್ಲಿ ನಡೆಸುತ್ತಿರುವ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸಿನ ಪ್ರವೇಶ ಮಿತಿಯನ್ನು 20 ರಿಂದ 40 ಕ್ಕೆ ಹೆಚ್ಚಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ತಪಾಸಣಾ ತಂಡದ ಶಿಫಾರಸ್ಸಿನನ್ವಯ ಮಂಜೂರಾತಿ ನೀಡುವಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಶ್ರೀ ಸದ್ಗುರು ಕಬೀರಾನಂದಸ್ವಾಮಿ ವಿದ್ಯಾಪೀಠ (ರಿ) ಇವರ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಪ್ಯಾರಾ ಮೆಡಿಕಲ್ ಸೈನ್ಸಸ್, ಚಳ್ಳಕೆರೆ ರಸ್ತೆ, ಚಿತ್ರದುರ್ಗ-577501 ಈ ಸಂಸ್ಥೆಯಲ್ಲಿ 2019-20 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸಿನ ಪ್ರವೇಶ ಮಿತಿಯನ್ನು 20 ರಿಂದ 40 ಕ್ಕೆ ಹೆಚ್ಚಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 275 ಎಂಎಂಸಿ 2019, ಬೆಂಗಳೂರು, ದಿನಾಂಕ: 26-09-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಸದ್ಗುರು ಕಬೀರಾನಂದಸ್ವಾಮಿ ವಿದ್ಯಾಪೀಠ ಇವರ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಪ್ಯಾರಾ ಮೆಡಿಕಲ್ ಸೈನ್ಸಸ್, ಚಳ್ಳಕೆರೆ ರಸ್ತೆ, ಚಿತ್ರದುರ್ಗ-577501 ಈ ಸಂಸ್ಥೆಯಲ್ಲಿ 2019-20 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸಿನ ಪ್ರವೇಶ ಮಿತಿಯನ್ನು 20(ಇಪ್ಪತ್ತು) ರಿಂದ 40(ನಲವತ್ತು) ಕ್ಕೆ ಹೆಚ್ಚಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

## ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ಶುಲ್ಕವನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಈ ಸಂಸ್ಥೆಯವರು ಸದರಿ ಕೋರ್ಸುಗಳನ್ನು ಪ್ರಾರಂಭಿಸುವ ಮೊದಲು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ಪ್ಯಾರಾ ಮೆಡಿಕಲ್ ಬೋರ್ಡ್‌ನ ಕ್ಯಾಲೆಂಡರ್ ಆಫ್ ಇವೆಂಟ್ಸ್‌ನ ಪ್ರಕಾರ ಪ್ರವೇಶಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಮೂಲ ಅಂಕಪಟ್ಟಿಗಳನ್ನು ಮತ್ತು ದೃಢೀಕರಣಗಳನ್ನು ಈ ಸಂಸ್ಥೆಯವರು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ.500.00 ರಂತೆ ನೊಂದಣಿ ಶುಲ್ಕ ಹಾಗೂ ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಠ ವಿದ್ಯಾರ್ಹತೆಯಾದ ಎಸ್.ಎಸ್.ಎಲ್.ಸಿ/ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರವು ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ, ಅದರಿಂದ ಉಂಟಾಗುವ ಅನಾನುಕೂಲ / ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸದರಿ ಸಂಸ್ಥೆಗೆ ಸರ್ಕಾರದಿಂದ ಮಂಜೂರಾದ ಸೀಟುಗಳಲ್ಲಿ ಶೇ.20 ರಷ್ಟು ಸೀಟುಗಳನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(9) ಸದರಿ ಸಂಸ್ಥೆಯು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10) ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಮೂಲಭೂತ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ, ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಸಂಸ್ಥೆಯನ್ನು ಎರಡನೇ ಬಾರಿಗೆ ತಪಾಸಣೆ ಮಾಡತಕ್ಕದ್ದು.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಈ ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸುವ ಮಾರ್ಗಸೂಚಿಗಳನ್ನು ಹಾಗೂ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(17) ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದುಪಡಿಸಬಹುದೆಂದು ಸಂಸ್ಥೆಯು ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(18) ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ / ಲೀಸ್‌ನಲ್ಲಿದ್ದ ಪಕ್ಷದಲ್ಲಿ ಬಾಡಿಗೆ / ಲೀಸ್ ಕರಾರು ಪತ್ರವು ರೂ.100/- ರ ಛಾಪಾ ಕಾಗದದಲ್ಲಿರತಕ್ಕದ್ದು ಮತ್ತು ಬಾಡಿಗೆ / ಲೀಸ್ ಅವಧಿಯು ಕನಿಷ್ಠ 10 ವರ್ಷಗಳಾಗಿರತಕ್ಕದ್ದು.

(19) ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 05 ವರ್ಷಗಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್‌ನ್ನು ನಡೆಸಲು ತನ್ನದೇ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(20) ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ಪ್ರಾರಂಭಿಸುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(21) ರಾಜ್ಯ ಸರ್ಕಾರ ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ನು ಯಥಾವತ್ತಾಗಿ ಪಾಲಿಸತಕ್ಕದ್ದು.

(22) ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ. ಜ್ಯೋತಿಪ್ರಕಾಶ್) 26.5.14
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

**ಇವರಿಗೆ:**

1. ಮುಖ್ಯ ಕಾರ್ಯನಿರ್ವಹಣಾ ನಿರ್ದೇಶಕರು, ಕರ್ನಾಟಕ ನರ್ಸಿಂಗ್ ಮತ್ತು ಅರೆವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ ಹಾಗೂ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
2. ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಲಕ್ಷ್ಮಿ ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಂ.5, ಹೊಸ ನಂ.40/20ಎ, ವಾಣಿ ವಿಲಾಸ ಆಸ್ಪತ್ರೆ ಎದುರು, ಫೋರ್ಟ್, ಬೆಂಗಳೂರು-560002.
3. ಅಧ್ಯಕ್ಷರು/ಕಾರ್ಯದರ್ಶಿ/ಪ್ರಾಂಶುಪಾಲರು, ಶ್ರೀ ಸದ್ಗುರು ಕಬೀರಾನಂದಸ್ವಾಮಿ ವಿದ್ಯಾಪೀಠ ಇವರ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಪ್ಯಾರಾ ಮೆಡಿಕಲ್ ಸೈನ್ಸಸ್, ಚಳ್ಳಕೆರೆ ರಸ್ತೆ, ಚಿತ್ರದುರ್ಗ-577501
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.